# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:– ಬಸವ – ಇಂದಿರಾ ವಸತಿ ಯೋಜನೆಯನ್ನು ವಿಭಜಿಸಿ "ಬಸವ ವಸತಿ ಯೋಜನೆ" ಮತ್ತು "ಇಂದಿರಾ ಆವಾಸ್ ಯೋಜನೆ"ಗಳನ್ನಾಗಿ ಪ್ರತ್ಯೇಕವಾಗಿ ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ:– ಸರ್ಕಾರದ ಆದೇಶ ಸಂಖ್ಯೆ ವಇ 86 ಹೆಚ್ಎಎಮ್ 2009 ದಿನಾಂಕ 13.04.2010

ಪ್ರಸ್ತಾವನೆ:–

ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿನ ಫಲಾನುಭವಿಗಳು ವಿವಿಧ ವಸತಿ ಯೋಜನೆಗಳಡಿಯಲ್ಲಿ ಮನೆ ನಿರ್ಮಾಣಕ್ಕಾಗಿ ಬಳಸುವ ಕಟ್ಟಡ ಸಾಮಗ್ರಿಗಳ ಬೆಲೆಯಲ್ಲಿ ಮತ್ತು ಕಾರ್ಮಿಕರ ಕೂಲಿ ದರಗಳಲ್ಲಿ ಗಣನೀಯ ಹೆಚ್ಚಳವಾಗಿದ್ದರಿಂದ ಗುಡಿಸಲುವಾಸಿಗಳು ಸರ್ಕಾರವು ನೀಡುತ್ತಿರುವ ಸೀಮಿತ ಸಹಾಯಧನದಲ್ಲಿ ಮನೆಗಳನ್ನು ನಿರ್ಮಿಸಿಕೊಳ್ಳಲಾಗದೇ ಗುಡಿಸಲುಗಳಲ್ಲಿಯೇ ವಾಸವನ್ನು ಮುಂದುವರೆಸಿದ್ದರಿಂದ, ರಾಜ್ಯ ಸರ್ಕಾರದ ಗ್ರಾಮೀಣ ಆಶ್ರಯ ಯೋಜನೆ ಮತ್ತು ಕೇಂದ್ರ ಸರ್ಕಾರದ ಇಂದಿರಾ ಆವಾಸ್ ಯೋಜನೆಯನ್ನು ಒಟ್ಟಿಗೆ ಸಂಘಟಿಸಿ ಬಸವ–ಇಂದಿರಾ ವಸತಿ ಯೋಜನೆಯೆಂದು ಸಂಯೋಜಿಸಿ, ರಾಜ್ಯ ಸರ್ಕಾರದ ಸಹಾಯಧನ, ಕೇಂದ್ರ ಸರ್ಕಾರದ ಸಹಾಯಧನ ಹಾಗೂ ಫಲಾನುಭವಿಯ ವಂತಿಗೆ/ಸಾಲದೊಂದಿಗೆ ಮುಂಬರುವ ಐದು ವರ್ಷಗಳಲ್ಲಿ ಎಲ್ಲರಿಗೂ ಮನೆಗಳನ್ನು ಒದಗಿಸಲು ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಯೋಜಿಸಲಾಗಿತ್ತು. ಆದರೆ, ಕೇಂದ್ರ ಸರ್ಕಾರವು ಇಂದಿರಾ ಆವಾಸ್ ಯೋಜನೆಯನ್ನು ರಾಜ್ಯ ಸರ್ಕಾರದ ಯೋಜನೆಯೊಂದಿಗೆ ಸಂಯೋಜಿಸಲು ಸಮ್ಮತಿಸದಿರುವುದರಿಂದ ಮತ್ತು ಈ ಎರಡೂ ಯೋಜನೆಗಳನ್ನು ವಿಲೀನಗೊಳಿಸಿದ ಪರಿಣಾಮವಾಗಿ ರಾಜ್ಯದ ಒಟ್ಟಾರೆ ಗುರಿ ಅರ್ಧಕ್ಕೆ ಇಳಿದಿದ್ದರಿಂದ, ಈ ಎರಡೂ ಯೋಜನೆಗಳನ್ನು ಬೇರ್ಪಡಿಸಿ ಅನುಷ್ಠಾನಗೊಳಿಸಲು ಈ ಕೆಳಗಿನ ಆದೇಶವನ್ನು ಪ್ರಸ್ತಾಪಿಸಲಾಗಿದೆ.

**ಸರ್ಕಾರದ ಆದೇಶ ಸಂ. ವಇ 1 ಹೆಚ್ಎಎಚ್ 2011 (ಭಾ–1), ಬೆಂಗಳೂರು, ದಿನಾಂಕ 17ನೇ ಮೇ 2011.**

ರಾಜ್ಯ ಸರ್ಕಾರದ 'ಗ್ರಾಮೀಣ ಆಶ್ರಯ ಯೋಜನೆ' ಮತ್ತು ಕೇಂದ್ರ ಸರ್ಕಾರದ 'ಇಂದಿರಾ ಆವಾಸ್ ಯೋಜನೆ'ಗಳನ್ನು ಸಂಯೋಜಿಸಿ ಅನುಷ್ಠಾನಗೊಳಿಸುತ್ತಿದ್ದ "ಬಸವ ಇಂದಿರಾ ವಸತಿ ಯೋಜನೆ"ಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಬೇರ್ಪಡಿಸಿ ಇಂದಿರಾ ಆವಾಸ್ ಯೋಜನೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯವಾಗಿ ಪ್ರತ್ಯೇಕವಾಗಿ ಅನುಷ್ಠಾನಗೊಳಿಸಲು ಹಾಗೂ ಬಸವ ವಸತಿ ಯೋಜನೆಯನ್ನು ರಾಜ್ಯ ಸರ್ಕಾರದ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವು ಈ ಕುರಿತು ಅವಶ್ಯವಿರುವ ಮಾರ್ಗಸೂಚಿಗಳನ್ನು ತಕ್ಷಣವೇ ಹೊರಡಿಸತಕ್ಕದ್ದು.

ರಾ.ಗಾಂ.ಗ್ರಾ.ವ.ನಿ.ನಿ.
ಬೆಂಗಳೂರು.
21 MAY 2011
ಸ್ವೀಕೃತಿ

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

Kvallur 17/5

(ಕೆ. ಆರ್. ವಲ್ಲೂರ)
ಪೀಠಾಧಿಕಾರಿ–2, ವಸತಿ ಇಲಾಖೆ.

1. ಮಹಾಲೇಖಪಾಲರು (ಎ ಮತ್ತು ಇ)(ಆಡಿಟ್ 1 ಮತ್ತು 2), ಕರ್ನಾಟಕ, ಬೆಂಗಳೂರು,
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿ., ಕೆಂಗೇರಿ, ಬೆಂಗಳೂರು.
4. ಎಲ್ಲಾ ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಗುಲಬರ್ಗಾ.
5. ಎಲ್ಲಾ ಜಿಲ್ಲಾಧಿಕಾರಿಗಳು
6. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
7. ವಸತಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ 3 ಮತ್ತು 9), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಸತಿ ಇಲಾಖೆ. ವಿಕಾಸ ಸೌಧ, ಬೆಂಗಳೂರು.
10. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು
11. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ.